**All India Radio: Bangalore**
**Regional Bulletin In Kannada**
**25.01.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಸಾಲಗಾರರ ಮೇಲೆ ನಿಯಮ ಬಾಹಿರ ಕ್ರಮ ಸಹಿಸುವುದಿಲ್ಲ - ಮೈಕ್ರೋ ಫೈನಾನ್ಸ್‌ಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ
2. ಚಿಕ್ಕಮಗಳೂರಿನ ಚಾರ್ಮಾಡಿಘಾಟ್ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ; ಬೆಂಕಿ ನಂದಿಸಲು ಅರಣ್ಯ ಇಲಾಖೆ ಸಿಬ್ಬಂದಿ ಹರ ಸಾಹಸ
3. ನಾಳೆ ೭೬ನೇ ಗಣರಾಜ್ಯೋತ್ಸವ ; ಬೆಂಗಳೂರಿನಲ್ಲಿ ಬಿಗಿ ಪೊಲೀಸ್ ಭದ್ರತೆ
4. ಇಂದು ರಾಷ್ಟ್ರೀಯ ಮತದಾರರ ದಿನ ; ರಾಜ್ಯದ ವಿವಿಧೆಡೆ ಜನ ಜಾಗೃತಿ

<><><><>

ಸಾಲಗಾರರ ಮೇಲೆ ನಿಯಮ ಬಾಹಿರ ಕ್ರಮ ಸಹಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಕ್ರೋ ಫೈನಾನ್ಸ್ ಕಂಪನಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಕಾರ್ಯಾಚರಣೆ ಮತ್ತು ಪರಿಣಾಮಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಸಹದ್ಯೋಗಿಗಳು ಹಾಗೂ ಹಿರಿಯ ಅಧಿಕಾರಿಗಳ ಜೊತೆ ಗೃಹಕಚೇರಿ ಕೃಷ್ಣಾದಲ್ಲಿಂದು ಮಹತ್ವದ ಸಭೆ ನಡೆಸಿದರು. ಒಬ್ಬರೇ ಸಾಲಗಾರರಿಗೆ ಮೇಲಿಂದ ಮೇಲೆ ಸಾಲ ನೀಡಿ, ತೀರಿಸಲು ಸಾಧ್ಯವಾಗದಿದ್ದಾಗ ನಿಯಮ ಬಾಹಿರ ಕ್ರಮಕ್ಕೆ ಮುಂದಾಗುತ್ತಿದ್ದೀರಿ. ಇದನ್ನು ಸರ್ಕಾರ ಸಹಿಸುವುದಿಲ್ಲ ಎಂದು ಫೈನಾನ್ಸ್ ಕಂಪನಿಗಳಿಗೆ ಹೇಳಿದ್ದಾರೆ. ಸಾಲಗಾರರು ಮನೆ ಜಪ್ತಿ ಮಾಡುವ ಮೊದಲು ನ್ಯಾಯಾಲಯದಿಂದ ಅನುಮತಿ ಪಡೆದಿದ್ದೀರಾ ? ಕಾನೂನು ಕೈಗೆತ್ತಿಕೊಳ್ಳಲು ನಿಮ್ಮ ಸಿಬ್ಬಂದಿಗೆ ಅನುಮತಿ ಕೊಟ್ಟವರು ಯಾರು ಎಂದು ಪ್ರಶ್ನಿಸಿದ್ದಾರೆ. ಸಾಲ ಕೊಡುವ ಮೊದಲು ಆಧಾರ್ ಕೆವೈಸಿ ಏಕೆ ಮಾಡಿಸಿಲ್ಲ ? ಇದನ್ನು ಮಾಡಿಸಿದ್ದರೆ, ಒಬ್ಬರೇ ಸಾಲಗಾರರಿಗೆ ಪದೇ ಪದೇ ಸಾಲ ಕೊಡುವುದು ತಪ್ಪುತ್ತಿತ್ತು ಎಂದು ತಿಳಿಸಿದ್ದಾರೆ. ಸಾಲ ವಸೂಲಾತಿಗೆ ರೌಡಿಶೀಟರ್‌ಗಳನ್ನು ಬಳಸದಂತೆ ಮುಖ್ಯಮಂತ್ರಿ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ಬಳಿಕ ಬ್ಯಾಂಕಿಂಗ್, ಫೈನಾನ್ಸ್, ಮೈಕ್ರೋ ಫೈನಾನ್ಸ್ ಕಂಪೆನಿಗಳ ಪ್ರತಿನಿಧಿಗಳನ್ನು ಸಭೆಯಿಂದ ಹೊರಗಿರಲು ಹೇಳಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಕಾನೂನು ಇಲಾಖೆ, ಗೃಹ ಇಲಾಖೆ, ಕಂದಾಯ ಇಲಾಖೆಗಳ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

<><><><>

ಸಾಲದ ನೆಪದಲ್ಲಿ ಮಹಿಳೆಯರ ಮೇಲೆ ಖಾಸಗಿ ಫೈನಾನ್ಸ್‌ಗಳು ಪ್ರಕರಣ ದಾಖಲಿಸುವುದು ಸರಿಯಲ್ಲ ಎಂದು ಸಚಿವ ಎಚ್.ಸಿ. ಮಹಾದೇವಪ್ಪ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಕಾನೂನಿನ ಪ್ರಕಾರ ಮಹಿಳೆಯರಿಗೆ ಶಿಕ್ಷೆ ನೀಡುವುದಾದರೆ ಕಾನೂನು ಮೂಲಕವೇ ಅವರು ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಚಾರ್ಮಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚು ಹೊತ್ತಿಕೊಂಡಿದ್ದು. ಅರಣ್ಯ ಇಲಾಖೆ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಚಾರ್ಮಾಡಿ ಘಾಟ್ ನ ಅಣ್ಣಪ್ಪ ಸ್ವಾಮಿ ದೇಗುಲ ಸಮೀಪದ ಅರಣ್ಯದಲ್ಲಿ ಬೆಂಕಿ ಹೊತ್ತಿಕೊಂಡಿದ್ದು ಸಾಕಷ್ಟು ಪ್ರಮಾಣದ ಅರಣ್ಯ ಭಾಗ ನಾಶವಾಗಿದೆ. ಕಳೆದ ಒಂದು ವಾರದಲ್ಲಿ ಚಾರ್ಮಾಡಿ ಘಾಟ್‌ನಲ್ಲಿ ಉಂಟಾದ ಎರಡನೇ ಕಾಡ್ಗಿಚ್ಚು ಪ್ರಕರಣ ಇದಾಗಿದೆ. ಈ ಬಗ್ಗೆ ಪ್ರತಿಕ್ರಿಯೆ

ನೀಡಿದ ಮೂಡಿಗೆರೆ ವಲಯ ಅರಣ್ಯ ಸಂರಕ್ಷಣಾಧಿಕಾರಿ ಚರಣ್ ಕುಮಾರ್, ಈ ಭಾಗದಲ್ಲಿ ನಿನ್ನೆ ರಾತ್ರಿಯಿಂದ ಹೆಚ್ಚಿನ ಬೆಂಕಿ ಕಾಣಿಸಿಕೊಂಡಿದ್ದು, ಬೆಂಕಿ ನಂದಿಸುವ ಕಾರ್ಯ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಕಾಡ್ಗಿಚ್ಚಿನಿಂದ ಅರಣ್ಯ ಸಂಪತ್ತಿನ ಜೊತೆಗೆ ವನ್ಯಜೀವಿಗಳು ಸಾವನ್ನಪ್ಪಿರುವ ಸಾಧ್ಯತೆಯಿದೆ.

<><><><>

ನಾಳೆ ೭೩ನೇ ಗಣರಾಜ್ಯೋತ್ಸವ ಸಂಭ್ರಮ. ಈ ಹಿನ್ನೆಲೆ ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಸಕಲ ಸಿದ್ಧತೆ ಮಾಡಲಾಗಿದೆ. ಬೆಳಗ್ಗೆ ೯ ಗಂಟೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಧ್ವಜಾರೋಹಣ ನೆರವೇರಿಸಲಿದ್ದಾರೆ. ಬಳಿಕ ಶಾಲಾ-ಕಾಲೇಜು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಇದೇ ವೇಳೆ ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ೮ ಮಂದಿ ಡಿಸಿಪಿ, ೧೭ ಮಂದಿ ಎಸಿಪಿ ಸೇರಿದಂತೆ ಹಲವು ಪೊಲೀಸ್ ಅಧಿಕಾರಿಗಳನ್ನು ಭದ್ರತೆಗೆ ನಿಯೋಜಿಸಲಾಗಿದೆ. ಮೈದಾನದ ಸುತ್ತ ಸಿಸಿ ಟಿವಿ ಕ್ಯಾಮೆರ ಅಳವಡಿಸಲಾಗಿದೆ.

<><><><>

ಗಣರಾಜ್ಯೋತ್ಸವ ಹಿನ್ನೆಲೆ ಬೆಂಗಳೂರಿನಲ್ಲಿ ನಾಳೆ ಬೆಳಗ್ಗೆ ೬ ರಿಂದ ಮೆಟ್ರೋ ಸಂಚಾರ ಆರಂಭವಾಗಲಿದೆ. ಭಾನುವಾರ ಸಾಮಾನ್ಯವಾಗಿ ೭ ಗಂಟೆಗೆ ಆರಂಭವಾಗುತ್ತಿದ್ದ ಮೆಟ್ರೋ ಸೇವೆಯನ್ನು ೧ ಗಂಟೆ ಮುಂಚಿತವಾಗಿಯೇ ಆರಂಭಿಸಲು ನಿರ್ಧರಿಸಲಾಗಿದೆ. ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನ, ಶಾಲಾಕಾಲೇಜುಗಳಲ್ಲಿ ನಡೆಯುವ ಗಣರಾಜ್ಯೋತ್ಸವ ಪರೇಡ್‌ನಲ್ಲಿ ವಿದ್ಯಾರ್ಥಿಗಳು ಭಾವಹಿಸುತ್ತಿರುವ ಹಿನ್ನೆಲೆ ಬಿಎಂಆರ್‌ಸಿಎಲ್ ಈ ಕ್ರಮ ಕೈಗೊಂಡಿದೆ. ಪ್ರಯಾಣಿಕರಿಗೆ ಸಮಸ್ಯೆಯಾಗದಂತೆ ೨೦ ಹೆಚ್ಚುವರಿ ಮೆಟ್ರೋ ರೈಲುಗಳು ಸಂಚರಿಸಲಿವೆ.

<><><><>

ಬೆಂಗಳೂರಿನ ಪುರಭವನದಲ್ಲಿ "ರಾಷ್ಟ್ರೀಯ ಮತದಾರರ ದಿನಾಚರಣೆ-೨೦೨೫" ಆಚರಿಸಲಾಯಿತು. ಕಾರ್ಯಕ್ರಮಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಮತದಾನದ ಹಕ್ಕಿನಿಂದ ಉತ್ತಮ ನಾಯಕನನ್ನು ಆಯ್ಕೆ ಮಾಡಲು ಸಾಧ್ಯ ಎಂದು ತಿಳಿಸಿದರು.

ಮೊದಲನೇ ಬಾರಿ ಮತದಾನ ಮಾಡುವ ಯುವ ಮತದಾರರು, ವಿಶೇಷ ಚೇತನರು, ತೃತೀಯ ಲಿಂಗಿಗಳು ಹಾಗೂ ಬುಡಕಟ್ಟು ಜನಾಂಗದವರಿಗೆ ಇದೇ ವೇಳೆ ಗುರುತಿನ ಚೀಟಿ ವಿತರಿಸಲಾಯಿತು. ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ೧ ಸಾವಿರದ ೫೦೦ ಕ್ಕೂ ಹೆಚ್ಚು ಮಂದಿ ಮತದಾನ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಇನ್ನಿತರೆ ವಿಷಯಗಳಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದಂತಹ ಅಧಿಕಾರಿಗಳಿಗೆ ಪ್ರಶಸ್ತಿ ಹಾಗೂ ಪಾರಿತೋಷಕ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಚುನಾವಣಾ ಅಧಿಕಾರಿಯಾದ ಮನೋಜ್ ಕುಮಾರ್ ಮೀನಾ, ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್, ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

<><><><>

ಇಂದು ರಾಷ್ಟ್ರೀಯ ಮತದಾರರ ದಿನ. ಈ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಮತದಾನದ ಕುರಿತಂತೆ ಜಾಗೃತಿ ಮೂಡಿಸಲಾಯಿತು. ಸುಭದ್ರ ಸರ್ಕಾರ ಮತ್ತು ಸದೃಢ ದೇಶ ನಿರ್ಮಾಣದಲ್ಲಿ ಯುವ ಜನರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ದಾವಣಗೆರೆ ಜಿಲ್ಲಾ ಪ್ರಧಾನ ನ್ಯಾಯಾಧೀಶೆ ರಾಜೇಶ್ವರಿ ಎನ್. ಹೆಗಡೆ ಹೇಳಿದ್ದಾರೆ. ಜಿಲ್ಲಾಡಳಿತ ಭವನದಲ್ಲಿಂದು ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಮತದಾನ ಮಾಡಲು ನಿರ್ಲಕ್ಷ್ಯ ತೋರಿಸಿದರೆ ಸದೃಢ ಸರ್ಕಾರ ಅಸ್ತಿತ್ವಕ್ಕೆ ಬರಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ಮತದಾರರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಸಲುವಾಗಿ ಇಂದು ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಆಚರಿಸಲಾಯಿತು. ಅರ್ಹ ಮತದಾರರೆಲ್ಲರೂ ಮತದಾನದ ದಿನದಂದು ತಪ್ಪದೆ ಮತಗಟ್ಟೆಗೆ ತೆರಳಿ ನಿರ್ಭೀತಿಯಿಂದ ಮತ ಚಲಾಯಿಸಬೇಕು ಎಂದು ಗದಗ ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ. ಸದೃಢ ಭಾರತದ ಪ್ರಗತಿಗೆ ಪ್ರತಿಯೊಬ್ಬ ಪ್ರಜೆ ಮತದಾನ ಮಾಡಲು ಮರೆಯಬಾರದು. ಮತದಾನದಿಂದ ದೂರ ಉಳಿಯುವುದೆಂದರೆ ಅದು ಸಂವಿಧಾನಕ್ಕೆ ಮಾಡಿದ ಅಪಚಾರ ಎಂದು ಪ್ರಭಾರಿ ಕಲಬುರಗಿ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಎ.ವಿ.ಶ್ರೀನಾಥ ಅಭಿಪ್ರಾಯಪಟ್ಟಿದ್ದಾರೆ. ಉತ್ತಮ ನಾಯಕನ ಆಯ್ಕೆ ಮಾಡಲು ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೇ ನಿರ್ಭೀತಿಯಿಂದ ಮತದಾನ ಮಾಡಬೇಕು ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರು ಹಾಗೂ ಚಿತ್ರದುರ್ಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ನಡೆದ ಮತದಾನ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮಾತನಾಡಿ, ಮತದಾನದ ಹಕ್ಕು ದೊಡ್ಡ ಜವಾಬ್ದಾರಿ ಎಂಬುದನ್ನು ಮರೆಯಬಾರದು ಎಂದು ಹೇಳಿದ್ದಾರೆ.

<><><>

ಉಡುಪಿಯಲ್ಲಿ ೫ ವರ್ಷದ ಬಾಲಕಿಗೆ ಅಪರಿಚಿತ ವ್ಯಕ್ತಿ ಲೈಂಗಿಕ ಕಿರುಕುಳ ನೀಡಿದ ಪ್ರಕರಣದ ಕುರಿತು ತ್ವರಿತ ಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ ನೀಡಿದ್ದಾರೆ. ಅಪಘಾತದಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಘಟನೆಯ ಮಾಹಿತಿ ಬಂದ ತಕ್ಷಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳ ಜೊತೆ ಮಾತನಾಡಿ ಘಟನೆಯ ವಿವರ ಪಡೆದಿದ್ದಾರೆ. ಘಟನೆಯನ್ನು ಗಂಭೀರವಾಗಿ ಪರಿಗಣಿಸಿ, ಆರೋಪಿಯನ್ನು ತಕ್ಷಣ ಪತ್ತೆ ಹಚ್ಚಬೇಕು. ಬಾಲಕಿಗೆ ಅಗತ್ಯವಾದ ಎಲ್ಲ ನೆರವನ್ನು ನೀಡಬೇಕು ಎಂದು ಸಚಿವರು ಜಿಲ್ಲಾಧಿಕಾರಿ ಹಾಗೂ ಎಸ್‌ಪಿಗೆ ಸೂಚನೆ ನೀಡಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆಯಲ್ಲಿ ಕಲ್ಲು ಕ್ರಷರ್‌ಗಳಿಗೆ ಅನುಮತಿ ನೀಡುವ ಮುನ್ನ ಕ್ರಷರ್ ಅಧಿನಿಯಮದಲ್ಲಿನ ಸುರಕ್ಷಿತ ವಲಯ ಕುರಿತಂತೆ ರೂಪಿಸಿರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಸೂಚಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡುವಿಕೆ ಹಾಗೂ ನಿಯಂತ್ರಣ ಪ್ರಾಧಿಕಾರ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಲ್ಲು ಕ್ರಶರ್‌ಗಳು ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿಯಿಂದ ನಿಗದಿಪಡಿಸಿದ ಅಂತರದಲ್ಲಿ ಇರಬೇಕು ಎಂದು ಹೇಳಿದ್ದಾರೆ. ಕ್ರಷರ್‌ಗಳಿಂದ ಸಾರ್ವಜನಿಕರು ಮತ್ತು ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಅನುಮತಿಗಳನ್ನು ನೀಡುವಂತೆ ನಿರ್ದೇಶನ ನೀಡಿದ್ದಾರೆ.

1

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>